# ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 853
ಸದಸ್ಯರ ಹೆಸರು : ಶ್ರೀಎಸ್. ರುದ್ರೇಗೌಡ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸ ಬೇಕಾದ ದಿನಾಂಕ : 12.12.2023
ಉತ್ತರಿಸುವ ಸಚಿವರು : ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ಭದ್ರಾವತಿಯಲ್ಲಿರುವ ಮೈಸೂರು ಕಾಗದ ಕಾರ್ಖಾನೆಯು ದಿವಂಗತ ಡಾ\|\| ಸರ್.ಎಂ. ವಿಶ್ವೇಶ್ವರಯ್ಯರವರಿಂದ ಸ್ಥಾಪಿತವಾಗಿದ್ದು, 2015 ರವರೆಗೂ ಉತ್ಕೃಷ್ಟ ಕಾಗದ ಉತ್ಪಾದಿಸಿ ನಂತರದಲ್ಲಿ ನ್ಯೂಸ್ಪ್ರಿಂಟ್ಸ್ ಭಾಗವನ್ನು ಸ್ಥಾಪಿಸಿ ಯಶಸ್ವಿಯಾಗಿ ನಡೆಸಿದ ಈ ಕಾರ್ಖಾನೆಯು ಸಾವಿರಾರು ಉದ್ಯೋಗಿಗಳಿಗೆ ಆಶ್ರಯ ನೀಡಿದ್ದು ಪ್ರಸ್ತುತ ಯಾವ ಕಾರಣಕ್ಕಾಗಿ ಅದು ಸ್ಥಗಿತಗೊಂಡಿದೆ: | ಮೈಸೂರು ಕಾಗದ ಕಾರ್ಖಾನೆಯು (ಎಂಪಿಎಂ) ತೀವ್ರ ತರಹದ ಹಣಕಾಸಿನ ಸಮಸ್ಯೆಯನ್ನು ಎದುರಿಸುತ್ತಿದ್ದು, ಕಾರ್ಖಾನೆಯ ಎಲ್ಲಾ ಉತ್ಪಾದನಾ ಘಟಕಗಳನ್ನು ದಿನಾಂಕ: 21.11.2015 ರಿಂದ ಸ್ಥಗಿತಗೊಳಿಸಲಾಗಿರುತ್ತದೆ.<br><br>ಜೂನ್-2023ರ ಅಂತ್ಯಕ್ಕೆ ಒಟ್ಟು ಸಂಚಿತ ನಷ್ಟ 1482 ಕೋಟಿ ರೂ.ಗಳಷ್ಟು ಆಗಿರುತ್ತದೆ. |
| ಆ) | ಕಳೆದ ಐದು ವರ್ಷಗಳಿಂದ ಸರ್ಕಾರ ಈ ಕಾರ್ಖಾನೆಯ ಪುನರಾರಂಭದ ಬಗ್ಗೆ ಭರವಸೆಯನ್ನು ನೀಡುತ್ತಿದ್ದು, ಈ ವರೆಗೆ ಯಾವುದೇ ಕ್ರಮ ಕೈಗೊಳ್ಳದಿರಲು ಕಾರಣಗಳೇನು; | ಸರ್ಕಾರವು ಕಾರ್ಖಾನೆಯ ಪುನರುಜ್ಜೀವನ ಸಾಧ್ಯವಿಲ್ಲವೆಂದು ತೀರ್ಮಾನಿಸಿ ಕಾರ್ಖಾನೆಯ ಕಾರ್ಯಚಟುವಟಿಕೆಗಳನ್ನು ಖಾಸಗಿಯವರಿಗೆ ಗುತ್ತಿಗೆ ಆಧಾರದಲ್ಲಿ ನೀಡಬೇಕೆಂದು ತೀರ್ಮಾನ ಕೈಗೊಂಡು, ಈ ಪ್ರಕ್ರಿಯೆಗಳಿಗೆ ಮೆ\|\| ಐಡೆಕ್‌ನ ಸೇವೆಗಳನ್ನು ಬಳಸಿಕೊಳ್ಳಲಾಗುತ್ತಿದೆ.<br><br>ಆರ್‌ಎಫ್‌ಕ್ಯೂ ಅನ್ನು ಏಪ್ರಿಲ್ 2017, ಆಗಸ್ಟ್ 2018 ಹಾಗೂ ಮಾರ್ಚ್ 2019ರಲ್ಲಿ ಪ್ರಕಟಿಸಲಾಗಿತ್ತು. ಆರ್‌ಎಫ್‌ಕ್ಯೂಗೆ ಯಾವುದೇ ಅರ್ಜಿ ಸ್ವೀಕೃತವಾಗಿರುವುದಿಲ್ಲ.<br><br>ಆರ್‌ಎಫ್‌ಕ್ಯೂ ಅನ್ನು ಕಂಪನಿಯು ಮೊದಲೇ ಅಪ್‌ಲೋಡ್ ಮಾಡಲಾಗಿದ್ದು ಮತ್ತು ಆರ್‌ಎಫ್‌ಕ್ಯೂಗಾಗಿ ಈಗಾಗಲೇ ವ್ಯಾಪಕ ಪ್ರಚಾರವನ್ನು ನೀಡಲಾಗಿರುವುದರಿಂದ |

| | | |
|---|---|---|
| | | ಪ್ರಸ್ತಾವನೆಗಾಗಿ ವಿನಂತಿಯನ್ನು (ಆರ್‌ಎಫ್‌ಪಿ) ನೇರವಾಗಿ ದಿನಾಂಕ: 25.11.2020ರಂದು ಅಪ್‌ಲೋಡ್ ಮಾಡಲಾಗಿದ್ದು, ಇ-ಟೆಂಡರ್ ತೆರೆದಾಗ ಯಾವುದೇ ಬಿಡ್‌ಗಳು ಸ್ವೀಕೃತವಾಗಿರುವುದಿಲ್ಲ.<br><br>ನಿರೀಕ್ಷಿತ ಬಿಡ್ಡುದಾರರು ನೀಲಗಿರಿ ಬೆಳೆಯಲು ಎಂಪಿಎಂಗೆ ವಿನಾಯಿತಿ ಹಾಗೂ ಯಾವುದೇ ಹೊಣೆಗಾರಿಕೆಗಳಿಲ್ಲದ ಕಂಪನಿಯ ಕಾರ್ಯಾಚರಣೆಗಳನ್ನು ನಡೆಸಲು ಬಯಸಿರುತ್ತಾರೆ. ಅದರಂತೆ, ನೀಲಗಿರಿ ಬೆಳೆಯಲು ಎಂಪಿಎಂಗೆ ವಿನಾಯಿತಿ ಮತ್ತು ಬಾಕಿ ಉಳಿದಿರುವ ರೂ.1102 ಕೋಟಿಗಳ ಹೊಣೆಗಾರಿಕೆಗಳ ಕುರಿತು ಸರ್ಕಾರವು ತೀರ್ಮಾನ ತೆಗೆದು ಕೊಳ್ಳಬೇಕಾಗಿರುತ್ತದೆ.<br><br>ದಿನಾಂಕ: 07.09.2023ರಂದು ಇಲಾಖಾ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಿರ್ಣಯದಂತೆ, ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ದಿನಾಂಕ 17-11-2023ರಂದು ಸಭೆ ನಡೆಸಲಾಗಿದ್ದು, ಈ ಕೆಳಕಂಡಂತೆ ಕ್ರಮವಹಿಸಲಾಗುತ್ತಿದೆ.<br>ಅ) ಅರಣ್ಯ ಇಲಾಖೆಯ ತಜ್ಞರ ಸಮಿತಿಯು ನೀಲಗಿರಿ ಬೆಳೆಯಲು ಎಂಪಿಎಂಗೆ ವಿನಾಯಿತಿ ನೀಡುವ ಸಂಬಂಧ ಪರಿಶೀಲಿಸಿ ವರದಿ ನೀಡಬೇಕಾಗಿದೆ.<br><br>ಆ) ಕಂಪನಿಯ ಸಾಲಗಳು/ಬಾಕಿಗಳ ಕುರಿತು ಆರ್ಥಿಕ ಇಲಾಖೆಯೊಡನೆ ಸಮಾಲೋಚಿಸಲಾಗುತ್ತಿದೆ. |
| (ಇ) | ಈ ಕಾರ್ಖಾನೆಯ ಯಂತ್ರೋಪಕರಣಗಳನ್ನು, ಭೂಪ್ರದೇಶ ಹಾಗೂ ಕಾರ್ಖಾನೆಯ ಉದ್ಯೋಗಿಗಳಿಗೆ ನಿರ್ಮಿಸಿದ್ದ ಸಾವಿರಾರು ಮನೆಗಳ ಸಂರಕ್ಷಣೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಈ ಕಾರ್ಖಾನೆಯ ಭೂಪ್ರದೇಶವನ್ನು ಮೈಸೂರು ಕಾಗದ ಕಾರ್ಖಾನೆಯು ಸಂರಕ್ಷಿಸಿದೆ.<br><br>ಕಾರ್ಖಾನೆಯು ನಿರ್ಮಿಸಿದ್ದ ಒಟ್ಟು 1742 ಮನೆಗಳ ಪೈಕಿ 310 ಮನೆಗಳು ಸುಸ್ಥಿತಿಯಲ್ಲಿದ್ದು ಆ ಮನೆಗಳಲ್ಲಿ ಸೇವೆ ಸಮಾಪ್ತಿಗೊಳಿಸಿದ ಉದ್ಯೋಗಿಗಳು, ಆರ್.ಎ.ಎಫ್. ಸಿಬ್ಬಂದಿಗಳು, ಸರ್ಕಾರಿ ನೌಕರರು ಹಾಗೂ ಸರ್ಕಾರಿ ಶಾಲೆಗಳ |

| | | |
|---|---|---|
| | | ಸಿಬ್ಬಂದಿಗಳು, ಎಂಪಿಎಂ ಕಾರ್ಖಾನೆಯ ಸಂಘ ಸಂಸ್ಥೆಗಳ ಉದ್ಯೋಗಿಗಳು ವಾಸವಾಗಿರುತ್ತಾರೆ.<br><br>ಸುಮಾರು 1430 ಮನೆಗಳು ವಾಸಕ್ಕೆ ಯೋಗ್ಯವಾಗಿಲ್ಲ ಹಾಗೂ ಈ ಮನೆಗಳ ಪೈಕಿ 1130 ಮನೆಗಳು 60 ರಿಂದ 80 ವರ್ಷದ ಹಿಂದೆ ನಿರ್ಮಿಸಿದ ವಸತಿ ಗೃಹಗಳಾಗಿವೆ. |
| (ಈ) | ಕಾರ್ಖಾನೆಯನ್ನು ಯಾವಾಗ ಪುನಪ್ರಾರಂಭಿಸಲಾಗುವುದು? | ನಿರೀಕ್ಷಿತ ಬಿಡ್ಡುದಾರರು ನೀಲಗಿರಿ ಬೆಳೆಯಲು ಎಂಪಿಎಂಗೆ ವಿನಾಯಿತಿ ಹಾಗೂ ಯಾವುದೇ ಹೊಣೆಗಾರಿಕೆಗಳಿಲ್ಲದ ಕಂಪನಿಯ ಕಾರ್ಯಾಚರಣೆಗಳನ್ನು ನಡೆಸಲು ಬಯಸುವುದರಿಂದ, ಅದರಂತೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದ್ದು, ತದನಂತರ ಕಾರ್ಖಾನೆಯನ್ನು ಪುನರ್ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತದೆ. |

ಸಂಖ್ಯೆ: ಸಿಐ 24 ಸಿಪಿಎಂ 2023 (ಇ)

**(ಎಂ.ಬಿ. ಪಾಟೀಲ)**
**ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ**
**ಮೂಲಸೌಲಭ್ಯ ಅಭಿವೃದ್ಧಿ ಸಚಿವರು**